ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕಟ್ಟಡ ಪರವಾನಗಿಯ ಬಗ್ಗೆ

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

229 (1863) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಗರಸಭೆ ವ್ಯಾಪ್ತಿಯಲ್ಲಿನ ಸ್ವತ್ತಿನ ಎ-ಖಾತೆಗಳಂತೆ ಕಟ್ಟಡ ಪರವಾನಗಿಗಳನ್ನು ಖಾತೆದಾರರಿಗೆ ವರ್ಗಾಯಿಸಲು ಇರುವ ಮಾನದಂಡಗಳೇನು ; ಇದಕ್ಕಾಗಿ ಯಾವ ದಾಖಲಾತಿಗಳನ್ನು ಸಲ್ಲಿಸಬೇಕು ; ಇದಕ್ಕೆ ಬೇಕಾಗುವ ಕಾಲಾವಕಾಶಗಳೆಷ್ಟು ; (ವಿವರ ನೀಡುವುದು)

(ಆ) ಸದರಿ ಕಟ್ಟಡ ಪರವಾನಗಿ ಬದಲಾವಣೆ/ತಿದ್ದುಪಡಿ ಮಾಡಲು ನಿಯಮಗಳಲ್ಲಿ ಅವಕಾಶವಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ?